ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ನಿಪಿ-1 ರ ಕ್ರಯದ ಕರಾರು ಪತ್ರದ ಕರಡನ್ನು ನಾನೇ ಪತ್ರ ಬರಹಗಾರನಾಗಿ ತಯಾರಿಸಿ ಸಹಿ ಮತ್ತು ಮೋಹರನ್ನು ಹಾಕಿರುತ್ತೇನೆ. ಸಾಕ್ಷಿಯ ಸಹಿಯನ್ನು ನಿಪಿ-1(ಐ) ಎಂದು ಗುರುತಿಸಲಾಯಿತು.

ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದಃ-

ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ಪ್ರತಿವಾದಿಗಳು ಲಿಖಿತ ಹೇಳಿಕೆ ಸಲ್ಲಿಸದೇ ಇರುವ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.